**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

======================================== ====================

**ಸಂ: ಸಿ4[6] /ಪ್ರೌ.ಶಿ./ಆ.ಆ.ಸ್ವ/ಸುತ್ತೋಲೆ/44/2018–19** **ದಿನಾಂಕ: 17.01.2019**

: : **ಸುತ್ತೋಲೆ** : :

ವಿಷಯ: ಫೆಬ್ರವರಿ–2019ರ ರಾಷ್ಟ್ರೀಯ ಜಂತುಹುಳ ನಿವಾರಣೆ ದಿನಾಚರಣೆ ಸಂಬಂಧ ಜಾಗೃತಿ ಮೂಡಿಸುವ ಬಗ್ಗೆ.

ಉಲ್ಲೇಖ: ಉಪನಿರ್ದೇಶಕರು, ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮರವರ ಇಮೇಲ್ ದಿನಾಂಕ: 18.12.2018.

**********

ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಫೆಬ್ರವರಿ–2019ರ ಅಂಗವಾಗಿ ಈಗಾಗಲೇ ಆರೋಗ್ಯ ಇಲಾಖಾ ವತಿಯಿಂದ ಸಂದೇಶಗಳನ್ನು ಕಳುಹಿಸಿದ್ದು, ತರಬೇತಿಯನ್ನು ಸಹ ನೀಡಲಾಗಿರುವುದಾಗಿ ತಿಳಿಸುತ್ತಾ, ತರಬೇತಿ ನಂತರದ ಕಾರ್ಯಕ್ರಮಗಳ ಕುರಿತು ಪ್ರಸ್ತಾಪಿಸಿ, ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆಯನ್ನು ದಿನಾಂಕ:08.02.2019 ಹಾಗೂ ನಿರ್ಮೂಲನಾ ದಿನಾಚರಣೆಯನ್ನು ದಿನಾಂಕ:14.02.2019ರಂದು ನಡೆಸಲು ಉದ್ದೇಶಿಸಿರುವುದಾಗಿ ತಿಳಿಸಿ, ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಕಾರ ನೀಡುವಂತೆ ಉಲ್ಲೇಖಿತ ಇ–ಮೇಲ್‌ನಲ್ಲಿ ಕೋರಿರುತ್ತಾರೆ.

ಪರಾವಲಂಬಿ ಜಂತುಹುಳುಗಳು ಮಕ್ಕಳ ಹೊಟ್ಟೆಯನ್ನು ಸೇರಿ ಆಹಾರದ ಮುಖಾಂತರ ಸೇವಿಸುವ ಪೋಷಕಾಂಶಗಳನ್ನು ಕಸಿಯುತ್ತಿರುವುದರಿಂದಾಗಿ ಮಕ್ಕಳಲ್ಲಿ ಕುಪೋಷಣೆಯು ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಸಹಕಾರದೊಂದಿಗೆ ಜಂತುಹುಳು ನಿರ್ಮೂಲನೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕಿದೆ. ಈ ಹಿನ್ನೆಲೆಯಲ್ಲಿ ಹಾಲಿ ಮಧ್ಯಾಹ್ನ ಉಪಹಾರ ಯೋಜನೆಯಡಿಯಲ್ಲಿ ಆರೋಗ್ಯ ಇಲಾಖೆಯಿಂದ ನೀಡಲಾಗುತ್ತಿರುವ ಜಂತುಹುಳು ನಾಶಕ ಮಾತ್ರೆಗಳ ಬಳಕೆಯನ್ನು ಮಾಡಲಾಗುತ್ತಿದೆ. ಆದಾಗ್ಯೂ ಫೆಬ್ರವರಿ–2019ರ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆಯ ಅಂಗವಾಗಿ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳ ಸಹಕಾರದೊಂದಿಗೆ ಜಂತುಹುಳುಗಳಿಂದ ಮಕ್ಕಳ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಮಕ್ಕಳಲ್ಲಿ ಹಾಗೂ ಪೋಷಕರಲ್ಲಿ ಜಾಗೃತಿ ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

18/1

ನಿರ್ದೇಶಕರು (ಪ್ರೌಢ ಶಿಕ್ಷಣ)

17/1

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ (ಸಂಬಂಧಿಸಿದ ಉಪನಿರ್ದೇಶಕರುಗಳ ಮುಖಾಂತರ).

**ಪ್ರತಿಯನ್ನು:**

1. ಜಂಟಿನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರುರವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
2. ಡಾ॥ ವೀಣಾ, ಉಪನಿರ್ದೇಶಕರು, ಆರ್.ಕೆ.ಎಸ್.ಕಾರ್ಯಕ್ರಮ rksk.karnataka@gmail.com ರವರಿಗೆ ಮಾಹಿತಿಗಾಗಿ.
3. ಕಛೇರಿ ಪ್ರತಿ.